**Akashvani: Bangalore**
**National Bulletin In Kannada**
**15.04.2026: 13.10 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**15.04.2026: 13.10 hrs**

********

**ಮುಖ್ಯಾಂಶಗಳು :**

1. ಕರ್ನಾಟಕದ ಆದಿಚುಂಚನಗಿರಿ ಕ್ಷೇತ್ರದಲ್ಲಿ 'ಶ್ರೀ ಗುರು ಭೈರವೈಕ್ಯ ಮಂದಿರ' ಲೋಕಾರ್ಪಣೆಗೊಳಿಸಿದ ಪ್ರಧಾನಿ ನರೇಂದ್ರ ಮೋದಿ
2. ಬಿಹಾರದ ನೂತನ ಮುಖ್ಯಮಂತ್ರಿಯಾಗಿ ಸಾಮ್ರಾಟ್ ಚೌಧರಿ, ಉಪಮುಖ್ಯಮಂತ್ರಿಗಳಾಗಿ ವಿಜಯ್ ಕುಮಾರ್ ಚೌಧರಿ, ಬಿಜೇಂದ್ರ ಪ್ರಸಾದ್ ಯಾದವ್ ಪ್ರಮಾಣವಚನ ಸ್ವೀಕಾರ
3. ಅಮೆರಿಕ ಮಧ್ಯಸ್ಥಿತಿಕೆಯಲ್ಲಿ ಲೆಬನಾನ್-ಇಸ್ರೇಲ್ ಮಾತುಕತೆ; ಸಂಘರ್ಷ ಕೊನೆಗೊಳಿಸಲು ಯತ್ನ
4. ಐಪಿಎಲ್ ಟಿ-೨೦ ಕ್ರಿಕೆಟ್: ಇಂದಿನ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು-ಲಖನೌ ಸೂಪರ್ ಜೈಂಟ್ಸ್ ಮುಖಾಮುಖಿ

********

ಕರ್ನಾಟಕದ ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಐತಿಹಾಸಿಕ ಆದಿಚುಂಚನಗಿರಿ ಕ್ಷೇತ್ರದಲ್ಲಿ 'ಶ್ರೀ ಗುರು ಭೈರವೈಕ್ಯ ಮಂದಿರ'ವನ್ನು ಪ್ರಧಾನಿ ನರೇಂದ್ರ ಮೋದಿ ಲೋಕಾರ್ಪಣೆಗೊಳಿಸಿದರು. ಇದೇ ವೇಳೆ ಅವರು, ಬಾಲಗಂಗಾಧರನಾಥ ಶ್ರೀಗಳ ಗದ್ದುಗೆಯನ್ನು ಉದ್ಘಾಟಿಸಿದರು. ನಂತರ ಬಿಜಿಎಸ್ ಕ್ರೀಡಾಂಗಣದಲ್ಲಿ ನಡೆದ ಸಂತ ಸಂಗಮ ವೇದಿಕೆ ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ, ಆದಿಚುಂಚನಗಿರಿ ಮಠಕ್ಕೆ ೨ ಸಾವಿರ ವರ್ಷಗಳ ಇತಿಹಾಸವಿದ್ದು, ಅನ್ನ, ಅಕ್ಷರ, ಆಧ್ಯಾತ್ಮ ಸೇರಿದಂತೆ ೬ ತತ್ವ ಸಿದ್ಧಾಂತಗಳನ್ನು ಭಕ್ತರಿಗೆ ಉಣಬಡಿಸುತ್ತಿದೆ. ಆದಿಚುಂಚನಗಿರಿ ಮಠವು, ನೀಡುತ್ತಿರುವ ಆರೋಗ್ಯ ಸೇವೆ ದೇಶಕ್ಕೆ ಮಾದರಿಯಾಗಿದೆ ಎಂದು ಶ್ಲಾಘಿಸಿದ್ದಾರೆ.

ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೩೮ ಸೆಕೆಂಡ್ಸ್ )

ಕಾರ್ಯಕ್ರಮದಲ್ಲಿ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಮಾಜಿ ಪ್ರಧಾನಿ ಎಚ್.ಡಿ.ದೇವೇಗೌಡ, ಕೇಂದ್ರದ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸೇರಿದಂತೆ ಹಲವು ಸಚಿವರು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ಪ್ರಧಾನಿ ನರೇಂದ್ರ ಮೋದಿ ಅವರು, ಆದಿಚುಂಚನಗಿರಿ ಮಠದಲ್ಲಿ ಕಾಲಭೈರವೇಶ್ವರ ಸ್ವಾಮಿಯ ದರ್ಶನ ಪಡೆದು, ಪೂಜೆ ಸಲ್ಲಿಸಿದರು. ಶ್ರೀಮಠದ ಗೋರಕ್ಷಕನಾಥ ತಪಸ್ಸು ಮಾಡಿದ ಜ್ವಾಲಪೀಠಕ್ಕೆ ಭೇಟಿ ನೀಡಿ, ಪ್ರಾರ್ಥನೆ ಸಲ್ಲಿಸಿದರು.

********

ಬಿಹಾರದ ನೂತನ ಮುಖ್ಯಮಂತ್ರಿಯಾಗಿ ಸಾಮ್ರಾಟ್ ಚೌಧರಿ ಇಂದು ಪ್ರಮಾಣವಚನ ಸ್ವೀಕರಿಸಿದರು. ಬಿಹಾರದ ಮುಖ್ಯಮಂತ್ರಿಯಾಗಿ ಬಿಜೆಪಿ ನಾಯಕರೊಬ್ಬರು ಅಧಿಕಾರ ಸ್ವೀಕರಿಸಿರುವುದು ಇದೇ ಮೊದಲು. ಉಪಮುಖ್ಯಮಂತ್ರಿಗಳಾಗಿ ವಿಜಯ್ ಕುಮಾರ್ ಚೌಧರಿ ಮತ್ತು ಬಿಜೇಂದ್ರ ಪ್ರಸಾದ್ ಯಾದವ್ ಪ್ರಮಾಣವಚನ ಸ್ವೀಕರಿಸಿದ್ದಾರೆ. ಪಾಟ್ನಾದ ಲೋಕಭವನದಲ್ಲಿ ಜರುಗಿದ ಸಮಾರಂಭದಲ್ಲಿ ರಾಜ್ಯಪಾಲರಾದ ನಿವೃತ್ತ ಲೆಫ್ಟಿನೆಂಟ್ ಜನರಲ್ ಸಯ್ಯದ್ ಅತಾ ಹಸ್ನೈನ್ ಪ್ರಮಾಣವಚನ ಬೋಧಿಸಿದರು. ಸಮಾರಂಭದಲ್ಲಿ ಜೆಡಿಯು ರಾಷ್ಟ್ರೀಯ ಅಧ್ಯಕ್ಷ ಮತ್ತು ಮಾಜಿ ಮುಖ್ಯಮಂತ್ರಿ ನಿತೀಶ್ ಕುಮಾರ್, ಬಿಜೆಪಿ ಹಿರಿಯ ನಾಯಕ ಜೆ.ಪಿ. ನಡ್ಡಾ, ಬಿಜೆಪಿ ಅಧ್ಯಕ್ಷ ನಿತಿನ್ ನವೀನ್ ಸೇರಿದಂತೆ ಪ್ರಮುಖ ನಾಯಕರು ಉಪಸ್ಥಿತರಿದ್ದರು. ಬಿಹಾರ ನೂತನ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಅವರನ್ನು ಪ್ರಧಾನಿ ನರೇಂದ್ರ ಮೋದಿ, ರಕ್ಷಣಾ ಸಚಿವ ರಾಜನಾಥ್ ಸಿಂಗ್, ಕೇಂದ್ರ ಗೃಹ ಸಚಿವ ಅಮಿತ್ ಶಾ ಸೇರಿದಂತೆ ಹಲವು ಕೇಂದ್ರ ಸಚಿವರು ಮತ್ತು ಎನ್‌ಡಿಎ ನಾಯಕರು ಅಭಿನಂದಿಸಿದ್ದಾರೆ. 'ಬಿಹಾರಕ್ಕಾಗಿ ಈ ಹೊಸ ಎನ್‌ಡಿಎ ತಂಡ, ಶಕ್ತಿ ಮತ್ತು ಅನುಭವದ ಸಂಗಮವಾಗಿದೆ. ಈ ಸರ್ಕಾರವು, ಬಿಹಾರದ ಜನರ ನಿರೀಕ್ಷೆಗಳನ್ನು ಪೂರೈಸುವುದಲ್ಲದೆ ರಾಜ್ಯದ ಅಭಿವೃದ್ಧಿಯನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲಿದೆ' ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ರಾಜನಾಥ್ ಸಿಂಗ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

********

ತಂತ್ರಜ್ಞಾನದ ಅಭಿವೃದ್ಧಿ, ಗ್ರಾಮೀಣ ಮತ್ತು ನಗರ ಆರೋಗ್ಯ ಸೇವೆಗಳ ನಡುವಿನ ಅಸಮಾನತೆಗಳನ್ನು ನಿವಾರಿಸಬೇಕು ಮತ್ತು ಸಾರ್ವತ್ರಿಕ ಗುಣಮಟ್ಟದ ಆರೋಗ್ಯ ಸೇವೆಗೆ ಪ್ರವೇಶ ನೀಡಬೇಕು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ. ಏಮ್ಸ್ ನಾಗ್ಪುರದ ಎರಡನೇ ಘಟಿಕೋತ್ಸವ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ರೋಗಿಗಳ ಬಗ್ಗೆ ಯುವ ವೈದ್ಯರು ಸಂವೇದನಾಶೀಲ ಮನೋಭಾವವನ್ನು ಹೊಂದಿರಬೇಕು. ವೈದ್ಯಕೀಯ ವೃತ್ತಿಯಲ್ಲಿ ಸೇವೆ ಸಲ್ಲಿಸುವಾಗ ನಿರಂತರ ಕಲಿಕೆ ಮತ್ತು ನೈತಿಕ ಮೌಲ್ಯಗಳನ್ನು ಬೆಳೆಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಸಲಹೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಮಹಾರಾಷ್ಟ್ರ ರಾಜ್ಯಪಾಲ ಜಿಷ್ಣು ದೇವ್ ವರ್ಮಾ, ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಆರೋಗ್ಯ ಖಾತೆ ರಾಜ್ಯ ಸಚಿವ ಪ್ರತಾರಾವ್ ಜಾಧವ್, ಏಮ್ಸ್ ನಾಗ್ಪುರದ ಅಧ್ಯಕ್ಷ ಡಾ.ಅನಂತ್ ಪಂಧಾರೆ ಉಪಸ್ಥಿತರಿದ್ದರು. ನಂತರ ರಾಷ್ಟ್ರಪತಿ ಅವರು, ನಾಗ್ಪುರದ ರಾಷ್ಟ್ರೀಯ ನೇರ ತೆರಿಗೆಗಳ ಅಕಾಡೆಮಿಯಲ್ಲಿ ೭೮ನೇ ಬ್ಯಾಚ್‌ನ ಭಾರತೀಯ ರಾಜಸ್ವ ಸೇವೆ ಅಧಿಕಾರಿ ತರಬೇತಿದಾರರ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ.

********

ವಿಶೇಷ ಸಂಸತ್ ಅಧಿವೇಶನದಲ್ಲಿ ಕೇಂದ್ರ ಸರ್ಕಾರ ಮಂಡಿಸಲಿರುವ ಮಹಿಳಾ ಮೀಸಲಾತಿ ಮಸೂದೆ ಸಮತೋಲಿತವಾಗಿದ್ದು, ಪ್ರತಿಯೊಂದು ಸಮುದಾಯ, ಪ್ರದೇಶ ಮತ್ತು ಪ್ರತಿಯೊಂದು ರಾಜ್ಯದ ಆಕಾಂಕ್ಷೆಗಳನ್ನು ಈಡೇರಿಸುತ್ತದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಶಾಸನದ ಬಗ್ಗೆ ಯಾವುದೇ ಟೀಕೆಗೆ ಅವಕಾಶವಿಲ್ಲ. ಈ ತಿಂಗಳ ೧೬ ರಿಂದ ೧೮ ರವರೆಗೆ ನಡೆಯಲಿರುವ ಸಂಸತ್ ಅಧಿವೇಶನದಲ್ಲಿ ತರಲಾಗುತ್ತಿರುವ ಶಾಸನದ ಕುರಿತು ಪ್ರತಿಯೊಂದು ರಾಜಕೀಯ ಪಕ್ಷಕ್ಕೂ ತಿಳಿಸಲಾಗಿದೆ. ಯಾವುದೇ ಪಕ್ಷ ಇದನ್ನು ವಿರೋಧಿಸುತ್ತಿಲ್ಲ ಎಂದು ಹೇಳಿದ್ದಾರೆ. ನಾರಿ ಶಕ್ತಿ ವಂದನ ಅಧಿನಿಯಮ ಅಂಗೀಕರಿಸಲ್ಪಟ್ಟಾಗ, ಯಾವುದೇ ರಾಜಕೀಯ ಪಕ್ಷ ಅದನ್ನು ವಿರೋಧಿಸಿರಲಿಲ್ಲ. ರಾಷ್ಟ್ರೀಯ ಹಿತಾಸಕ್ತಿಯಲ್ಲಿ ಒಟ್ಟಾಗಿ ಬಂದ ಎಲ್ಲಾ ರಾಜಕೀಯ ಪಕ್ಷಗಳಿಗೆ ಪ್ರಧಾನಿ ನರೇಂದ್ರ ಮೋದಿ ಕೃತಜ್ಞತೆ ಕೂಡ ಸಲ್ಲಿಸಿದ್ದಾರೆ ಎಂದು ಅವರು ಹೇಳಿದರು. ಮಹಿಳಾ

ಮೀಸಲಾತಿ ರಾಜಕೀಯ ವಿಷಯವಾಗಲು ಸಾಧ್ಯವಿಲ್ಲ. ಮಹಿಳಾ ಮೀಸಲಾತಿ ಪ್ರಕ್ರಿಯೆಯು ಮತ್ತಷ್ಟು ವಿಳಂಬವಾದರೆ, ಅದು ಅತ್ಯಂತ ನೋವಿನ ಸಂಗತಿಯಾಗಲಿದೆ ಎಂದು ಸಚಿವ ಕಿರಣ್ ರಿಜಿಜು ಅಭಿಪ್ರಾಯಪಟ್ಟಿದ್ದಾರೆ.

********

ಪಶ್ಚಿಮ ಏಷ್ಯಾ ಸಂಘರ್ಷದಿಂದ ಉಂಟಾದ ಜಾಗತಿಕ ಅನಿಶ್ಚಿತತೆಯ ನಡುವೆಯೂ ಭಾರತದ ಆರ್ಥಿಕ ಬೆಳವಣಿಗೆಯ ಮುನ್ನೋಟವು ಸ್ಥಿರವಾಗಿದೆ ಎಂದು ಅಂತಾರಾಷ್ಟ್ರೀಯ ಹಣಕಾಸು ನಿಧಿ-ಐಎಂಎಫ್ ಮುಖ್ಯ ಅರ್ಥಶಾಸ್ತ್ರಜ್ಞ ಪಿಯರೆ ಒಲಿವಿಯರ್ ಗೌರಿಂಚಾಸ್ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨೦೨೫ ರಲ್ಲಿ ಭಾರತ ಉತ್ತಮ ಆರ್ಥಿಕ ಬೆಳವಣಿಗೆ ಸಾಧಿಸಿದ್ದು, ಜಿಡಿಪಿ ಬೆಳವಣಿಗೆ ಶೇಕಡಾ ೭.೬ ಎಂದು ಅಂದಾಜಿಸಲಾಗಿದೆ. ಇದೇ ವೇಳೆ ೨೦೨೬ ರಲ್ಲಿ ಸುಮಾರು ೬.೫ ಪ್ರತಿಶತದಷ್ಟು ಜಿಡಿಪಿ ಬೆಳವಣಿಗೆ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ. ಆದಾಗ್ಯೂ, ಜಾಗತಿಕ ಇಂಧನ ಬೆಲೆಗಳು ಮತ್ತು ಹೆಚ್ಚುತ್ತಿರುವ ಆಹಾರ ವೆಚ್ಚಗಳಿಂದಾಗಿ ೨೦೨೬ ರಲ್ಲಿ ಹಣದುಬ್ಬರ ಸುಮಾರು ೪.೭ ಪ್ರತಿಶತಕ್ಕೆ ಏರಿಕೆಯಾಗಬಹುದು ಎಂದು ಅವರು ಅಂದಾಜಿಸಿದ್ದಾರೆ. ಅನೇಕ ರಾಷ್ಟ್ರಗಳು ನಿಧಾನಗತಿಯ ವಿಸ್ತರಣೆ ಮತ್ತು ಹೆಚ್ಚುತ್ತಿರುವ ಅನಿಶ್ಚಿತತೆಯೊಂದಿಗೆ ಹೋರಾಡುತ್ತಿರುವ ಸಮಯದಲ್ಲಿ ಜಾಗತಿಕ ಬೆಳವಣಿಗೆಯ ಪ್ರಮುಖ ಚಾಲಕನಾಗಿ ಭಾರತದ ಸ್ಥಾನವನ್ನು ಐಎಂಎಫ್ ಮೌಲ್ಯಮಾಪನವು ಒತ್ತಿಹೇಳಿದೆ.

********

ಪಶ್ಚಿಮ ಬಂಗಾಳದಲ್ಲಿ ಮೊದಲ ಹಂತದ ವಿಧಾನಸಭಾ ಚುನಾವಣೆಗೆ ಕೇವಲ ಒಂದು ವಾರ ಬಾಕಿ ಇರುವ ಕಾರಣ ಬಿಜೆಪಿ ತನ್ನ ಚುನಾವಣಾ ಪ್ರಚಾರ ಬಿರುಸುಗೊಳಿಸಿದೆ. ಬಿಜೆಪಿ ಹಿರಿಯ ನಾಯಕ, ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ರಾಜ್ಯದಲ್ಲಿ ಹಲವಾರು ಸಾರ್ವಜನಿಕ ಸಭೆಗಳನ್ನು ನಡೆಸಲಿದ್ದಾರೆ. ಡಾರ್ಜಿಲಿಂಗ್‌ನ ಲೆಬಾಂಗ್‌ನಲ್ಲಿಂದು ಮಧ್ಯಾಹ್ನ ನಡೆಯುವ ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ. ನಂತರ ಜಲ್ಪೈಗುರಿ ಜಿಲ್ಲೆಯ ರಾಜ್‌ಗಂಜ್‌ನಲ್ಲಿ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಬಳಿಕ ಅವರು ಅಲಿಪುರ್ದೂರ್‌ನ ಫಲಕತಾ ಮಿಲ್ ರಸ್ತೆ ಮೈದಾನದಲ್ಲಿ ರ್‍ಯಾಲಿಯಲ್ಲಿ ಭಾಗವಹಿಸಲಿದ್ದಾರೆ. ಕೂಚ್ ಬೆಹಾರ್‌ನ ತುಫಂಗಂಜ್‌ನಲ್ಲಿರುವ ಕಾಲಿಬರಿ ಆರ್‌ಎಂಸಿ ಮೈದಾನದಲ್ಲಿ ನಡೆಯುವ ಸಾರ್ವಜನಿಕ ಸಭೆಯಲ್ಲಿ ಸಚಿವ ಅಮಿತ್ ಶಾ ಪಾಲ್ಗೊಳ್ಳಲಿದ್ದಾರೆ. ಇನ್ನೊಂದೆಡೆ, ಟಿಎಂಸಿ ಮತ್ತು ಕಾಂಗ್ರೆಸ್ ನಾಯಕರು ತಮ್ಮ ಪಕ್ಷದ ಅಭ್ಯರ್ಥಿಗಳ ಪರ ಪ್ರಚಾರದಲ್ಲಿ ತೊಡಗಲಿದ್ದಾರೆ.

********

ಮಹತ್ವದ ರಾಜತಾಂತ್ರಿಕ ಬೆಳವಣಿಗೆಯಲ್ಲಿ, ಲೆಬನಾನ್ ಮತ್ತು ಇಸ್ರೇಲ್ ದಶಕಗಳಲ್ಲಿ ತಮ್ಮ ಮೊದಲ ನೇರ ಮಾತುಕತೆಗಳನ್ನು ಅಮೆರಿಕದ ವಾಷಿಂಗ್ಟನ್ ಡಿ.ಸಿ.ಯಲ್ಲಿ ನಡೆಸಿವೆ. ಇರಾನ್ ಬೆಂಬಲಿತ ಉಗ್ರಗಾಮಿ ಗುಂಪು - ಹೆಜ್ಬೊಲ್ಲಾ ಒಳಗೊಂಡ ವಾರಗಳ ಸಂಘರ್ಷದ ನಂತರ ಈ ಬೆಳವಣಿಗೆ ನಡೆದಿದೆ. ಎರಡು ಗಂಟೆಗಳ ಈ ಸಭೆಯಲ್ಲಿ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಕೂಡ ಉಪಸ್ಥಿತರಿದ್ದರು. ಬಳಿಕ ಮಾತನಾಡಿದ ಅವರು, ಚರ್ಚೆಗಳು ಉತ್ಪಾದಕವಾಗಿವೆ ಮತ್ತು ಔಪಚಾರಿಕ ಮಾತುಕತೆಗಳನ್ನು ಪ್ರಾರಂಭಿಸುವುದರ ಮೇಲೆ ಕೇಂದ್ರೀಕರಿಸಿದೆ. ಆದರೆ ತಕ್ಷಣದ ಪ್ರಗತಿ ಅಸಂಭವ. ಯುದ್ಧವನ್ನು ಕೊನೆಗೊಳಿಸಲು ಯಾವುದೇ ಒಪ್ಪಂದವು ಲೆಬನಾನ್ ಮತ್ತು ಇಸ್ರೇಲ್ ಸರ್ಕಾರಗಳ ನಡುವೆ ನೇರವಾಗಿ ನಡೆಯಬೇಕು ಎಂದು ಹೇಳಿದ್ದಾರೆ.

********

ಛತ್ತೀಸ್‌ಗಢದ ಸಿಂಘಾಂತೇರೈ ಗ್ರಾಮದಲ್ಲಿ ಸಂಭವಿಸಿದ ಬಾಯ್ಲರ್ ಸ್ಫೋಟದಲ್ಲಿ ಮೃತಪಟ್ಟವರ ಸಂಖ್ಯೆ ೧೪ ಕ್ಕೆ ಏರಿಕೆಯಾಗಿದೆ. ಶಕ್ತಿ ಜಿಲ್ಲೆಯ ಸಿಂಘಾಂತೇರೈ ಗ್ರಾಮದಲ್ಲಿರುವ ವೇದಾಂತ ಲಿಮಿಟೆಡ್ ವಿದ್ಯುತ್ ಸ್ಥಾವರದಲ್ಲಿ ಬಾಯ್ಲರ್ ಟ್ಯೂಬ್ ಸ್ಫೋಟಗೊಂಡು ನಿನ್ನೆ ಈ ಘಟನೆ ಸಂಭವಿಸಿದೆ.

********

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಲಖ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ. ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಪಂದ್ಯದಲ್ಲಿ ಕೊಲ್ಕತ್ತಾ ನೈಟ್ ರೈಡರ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ೩೨ ರನ್‌ಗಳಿಂದ ಭರ್ಜರಿ ಜಯ ದಾಖಲಿಸಿತು.

********